# ಕರ್ನಾಟಕ ವಿಧಾನ ಪರಿಷತ್ತು

1. ಸದಸ್ಯರ ಹೆಸರು : ಡಾ|| ತಳವಾರ್ ಸಾಬಣ್ಣ
2. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 913
3. ಉತ್ತರಿಸಬೇಕಾದ ದಿನಾಂಕ : 23.02.2023

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯಲ್ಲಿ ಎಂ.ಜಿ.ನರೇಗಾ ಯೋಜನೆ ಅಡಿಯಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಶಾಲೆಗಳ ಶೌಚಾಲಯ, ಆಟದ ಮೈದಾನ, ಕಾಂಪೌಡ್ ಎತ್ತರಿಸುವುದು ಮತ್ತು ಅಡುಗೆ ಕೋಣೆಗಳ ನಿರ್ಮಾಣ ಮಾಡಲಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು: (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಕೈಗೊಂಡ ಕಾಮಗಾರಿಗಳ ವಿವರ:<br>1.ಶೌಚಾಲಯ-283<br>2. ಆಟದ ಮೈದಾನ-221<br>3. ಕಾಂಪೌಡ್-232<br>4. ಅಡುಗೆ ಕೋಣೆಗಳು-06 |
| ಆ) | ಎಂ.ಜಿ.ನರೇಗಾ ಯೋಜನೆಯಡಿಯಲ್ಲಿ ಶಾಲೆಗಳಿಗೆ ಸದರಿ ಮೂಲ ಸೌಕರ್ಯಗಳನ್ನು ಒದಗಿಸಲು ಬಂದಿರುವ ಪ್ರಸ್ತಾವನೆಗಳೆಷ್ಟು: ಅಂಗೀಕರಿಸಿ ಜಾರಿಗೊಳಿಸಲಾಗಿರುವ ಪ್ರಸ್ತಾವನೆಗಳು ಎಷ್ಟು : | ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ ಶಾಲೆಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು 1251 ಕಾಮಗಾರಿಗಳನ್ನು ಗ್ರಾಮ ಪಂಚಾಯತಿಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ಅನುಮೋದನೆಗೆ ಜಿಲ್ಲಾ ಪಂಚಾಯತಿಗೆ ಸಲ್ಲಿಸಿದ್ದು, ಎಲ್ಲಾ 1251 ಕಾಮಗಾರಿಗಳನ್ನು ಅನುಮೋದಿಸಲಾಗಿರುತ್ತದೆ. |
| ಇ) | ಈ ಶಾಲೆಗಳಿಗೆ ಎಂ.ಜಿ. ನರೇಗಾದಡಿಯಲ್ಲಿ ಮೂಲ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಆದೇಶ ಹೊರಡಿಸಿದೆಯೇ: | ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿರುವ ಎಲ್ಲಾ ಸರ್ಕಾರಿ ಶಾಲೆಗಳಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಮತಿಸಲ್ಪಟ್ಟ ಕಾಮಗಾರಿಗಳಾದ ಕಾಂಪೌಂಡ್, ಶೌಚಾಲಯ, ಅಡುಗೆ ಮನೆ, ಆಟದ ಮೈದಾನ, ಪೌಷ್ಠಿಕ ತೋಟ ಮತ್ತು ಮಳೆ ನೀರು ಕೊಯ್ಲು ಕಾಮಗಾರಿಗಳನ್ನು ಕ್ರಿಯಾ ಯೋಜನೆಗಳಲ್ಲಿ ಅಳವಡಿಸಿಕೊಂಡು ಅನುಮೋದನೆ ಪಡೆದುಕೊಂಡು ಅನುಷ್ಠಾನಗೊಳಿಸಲು ಸೂಚನೆ ನೀಡಲಾಗಿದೆ. |
| ಈ) | ಶೌಚಾಲಯ, ಆಟದ ಮೈದಾನ ಮುಂತಾದ ಸೌಲಭ್ಯಗಳನ್ನು ಒದಗಿಸಲು ಕಲಬುರಗಿ ಜಿಲ್ಲಾ ಪಂಚಾಯಿತಿ ಯೋಜನೆ ಸಿದ್ಧಪಡಿಸಿದೆಯೇ: ಮತ್ತು ಇದಕ್ಕೆ ವಾರ್ಷಿಕವಾಗಿ ಒದಗಿಸಿರುವ ಹಣ ಎಷ್ಟು? (ವಿವರ ನೀಡುವುದು) | ಕಲಬುರಗಿ ಜಿಲ್ಲೆ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಶಾಲೆಗಳಿಗೆ ಶೌಚಾಲಯ, ಆಟದ ಮೈದಾನ ಮುಂತಾದ ಸೌಲಭ್ಯಗಳನ್ನು ಒದಗಿಸಲು ಕಲಬುರಗಿ ಜಿಲ್ಲಾ ಪಂಚಾಯಿತಿ ಯೋಜನೆ ಸಿದ್ಧಪಡಿಸಿದ್ದು, ವಾರ್ಷಿಕವಾಗಿ 2975.4 ಲಕ್ಷ ಅನುದಾನವನ್ನು ಒದಗಿಸಲಾಗಿದೆ. |

ಸಂಖ್ಯೆ: ಗ್ರಾಅಪ 103(8) ಉಖಾಯೋ 2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

# ಪೂರಕ ಟಿಪ್ಪಣಿ

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಶಾಲೆಗಳಿಗೆ ಈ ಕೆಳಕಂಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅವಕಾಶವಿರುತ್ತದೆ.

| ಕ್ರ.ಸಂ | ಕಾಮಗಾರಿಗಳು | ಘಟಕ ವೆಚ್ಚ (ರೂ. ಲಕ್ಷಗಳಲ್ಲಿ) |
|---|---|---|
| 1 | ಕಾಂಪೌಂಡ್ (ಆವರಣ ಗೋಡೆ) | 6.40 |
| 2 | ಶೌಚಾಲಯ | 5.20 |
| 3 | ಆಟದ ಮೈದಾನ | |
| | 1. ಬ್ಯಾಸ್ಕೆಟ್ ಬಾಲ್ | 5.50 |
| | 2. ಕಬಡ್ಡಿ ಅಂಕಣ | 2.80 |
| | 3. ರನ್ನಿಂಗ್ ಟ್ರ್ಯಾಕ್ | 5.67 |
| | 4. ಖೋಖೋ ಅಂಕಣ | 3.60 |
| | 5. ವಾಲಿಬಾಲ್ ಅಂಕಣ | 5.40 |
| 4 | ಅಡುಗೆ ಕೋಣೆ | 7.50 |
| 5 | ಪೌಷ್ಠಿಕ ತೋಟ | 0.20 |
| 6 | ಮಳೆ ನೀರು ಕೊಯ್ಲು | 1.95 |

ರಾಜ್ಯದಲ್ಲಿ ಕಳೆದ 05 ವರ್ಷಗಳಲ್ಲಿ 12547 ಗ್ರಾಮೀಣ ಸರ್ಕಾರಿ ಶಾಲೆಗಳಿಗೆ ಕಾಂಪೌಂಡ್, 2331 ಆಟದ ಮೈದಾನಗಳು, 17574 ಶಾಲೆ ಮತ್ತು ಅಂಗನವಾಡಿ ಶೌಚಾಲಯಗಳನ್ನು ನಿರ್ಮಿಸಲಾಗಿದೆ.

ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ರವರು ರಾಜ್ಯದಲ್ಲಿ ಕಾಂಪೌಂಡ್ ಹೊಂದಿಲ್ಲದೇ ಇರುವ 3364 ಸರ್ಕಾರಿ ಶಾಲೆಗಳ ಪಟ್ಟಿಯನ್ನು ಒದಗಿಸಿದ್ದು, ಸದರಿ ಶಾಲೆಗಳಿಗೆ ಕಾಂಪೌಂಡ್ ನಿರ್ಮಾಣ ಕಾಮಗಾರಿಗಳನ್ನು 2023-24ನೇ ಸಾಲಿನ ನರೇಗಾ ಯೋಜನೆಯ ಕ್ರಿಯಾ ಯೋಜನೆಯಲ್ಲಿ ಕಡ್ಡಾಯವಾಗಿ ಅಳವಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತಿಗಳಿಗೆ ಸೂಚನೆ ನೀಡಲಾಗಿದೆ.

2023-24ನೇ ಸಾಲಿನ ಆಯವ್ಯಯದಲ್ಲಿ ಸರ್ಕಾರಿ ಶಾಲೆಗಳಿಗೆ ಈ ಕೆಳಕಂಡ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಘೋಷಣೆ ಮಾಡಲಾಗಿದೆ.

1. ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ಊಟ ಮಾಡಲು ಹಾಗೂ ಇತರೆ ಕಾರ್ಯಕ್ರಮಗಳಿಗೆ ಅನುವಾಗುವಂತೆ ನರೇಗಾ ಯೋಜನೆಯಡಿ ರೂ.18.00 ಲಕ್ಷ ಘಟಕ ವೆಚ್ಚದಲ್ಲಿ ಆಹಾರ ಮಂದಿರ ನಿರ್ಮಾಣ.
2. ಸರ್ಕಾರಿ ಶಾಲೆಗಳಲಿ ರೂ. 80 ಕೋಟಿ ವೆಚ್ಚದಲ್ಲಿ 5581 ಶೌಚಾಲಯಗಳ ನಿರ್ಮಾಣ.
3. ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮೀಣ ಕ್ರೀಡೆಗಳನ್ನು ಮಕ್ಕಳಿಗೆ ಪರಿಚಯಿಸಲು ಮತ್ತು ಉತ್ತೇಜಿಸಲು ನರೇಗಾ ಯೋಜನೆಯಡಿ ರೂ. 5 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ.

7.4.

ಮುಖ್ಯ ಕಾರ್ಯಾಚರಣೆ ಅಧಿಕಾರಿ (ಪ್ರ)
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ